Editor & Publisher: Santosh Kumar
PRGI Registration No.: KNBIL/26/A5237

# ಸ್ವರ್ಣ ಭಾರತ್ ಟೈಮ್ಸ್

ಪಾರಪತ್ರಿಕೆ

SWARNA BHARAT TIMES

Voice of the People | Vision of the Nation

Executive Editor:
Vishwakeerthi A.V


ಸಂಪುಟ/Volume– 01 | ಸಂಚಿಕೆ /Issue– 03 | 30 ಜುಲೈ/ July 2026 | ಪುಟಗಳು/Page-4 | ಬೆಲೆ/Rate. 5/-

swarnabharattimes@gmail.com | +91 98457 32329 | Follow us on: Facebook • Instagram @SwarnaBharatTimes | www.swarnabharattimes.com

# ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ರಾಜೀನಾಮೆ

## ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿವಾದದ ನಡುವೆ ಮಹತ್ವದ ರಾಜಕೀಯ ಬೆಳವಣಿಗೆ


ಧರ್ಮೇಂದ್ರ ಪ್ರಧಾನ ರಾಜೀನಾಮೆ


ರಾಜೀನಾಮೆ ಪತ್ರವನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಸಲ್ಲಿನಿಬಿದ ಧರ್ಮೇಂದ್ರ ಪ್ರಧಾನ



ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿರುದ್ಧ ವಿದ್ಯಾರ್ದಿಗಳ ಪ್ರತಿಭಟನೆ



ದೆಹಲಿಯ ಜಂತರ್ ಮಂತರ್‌ನಲ್ಲಿ ಕಾಕ್ರೋಚ್ ಜನತಾ ಪಾರ್ಟಿ (CJP) ನೇತೃತ್ವದಲ್ಲಿ ನಡೆಯುತ್ತಿರುವ ಆಂದೋಲನ


ಪ್ರಲ್ಹಾದ್ ಜೋಶಿ ಅವರಿಗೆ ಕೇಂದ್ರ ಶಿಕ್ಷಣ ಸಚಿವರ ಹೆಚ್ಚುವರಿ ಜವಾಬ್ದಾರಿ

ನವದೆಹಲಿ | ಜುಲೈ 25, 2026: ದೇಶದ ಶಿಕ್ಷಣ ಕ್ಷೇತ್ರದಲ್ಲಿ ಕಳೆದ ಕೆಲವು ವಾರಗಳಿಂದ ತೀವ್ರ ಚರ್ಚೆಗೆ ಕಾರಣವಾಗಿದ್ದ ನೀಟ್ (ಓಇಇಖ) ಪ್ರಶ್ನೆಪತ್ರಿಕೆ ಸೋರಿಕೆ ವಿವಾದ ಹಾಗೂ ಅದನ್ನು ಅನುಸರಿಸಿ ದೇಶಾದ್ಯಂತ ನಡೆದ ವಿದ್ಯಾರ್ಥಿಗಳ ಪ್ರತಿಭಟನೆಯ ನಡುವೆಯೇ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ತಮ್ಮ ರಾಜೀನಾಮೆ ಪತ್ರವನ್ನು ಸಲ್ಲಿಸಿರುವ ಧರ್ಮೇಂದ್ರ ಪ್ರಧಾನ ಅವರ ನಿರ್ಧಾರವು ರಾಷ್ಟ್ರೀಯ ರಾಜಕೀಯ ಹಾಗೂ ಶಿಕ್ಷಣ ವಲಯದಲ್ಲಿ ಮಹತ್ವದ ಬೆಳವಣಿಗೆಯಾಗಿ ಪರಿಗಣಿಸಲಾಗುತ್ತಿದೆ.

### ದೇಶವ್ಯಾಪಿ ವಿದ್ಯಾರ್ಥಿಗಳ ಆಕ್ರೋಶ

ನೀಟ್ ಪರೀಕ್ಷೆಯ ಪಾರದರ್ಶಕತೆ ಮತ್ತು ವಿಶ್ವಾಸಾರ್ಹತೆ ಕುರಿತು ಪ್ರಶ್ನೆಗಳು ಉದ್ಭವಿಸಿದ ನಂತರ ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಣ ತಜ್ಞರು ದೇಶದ ವಿವಿಧ ಭಾಗಗಳಲ್ಲಿ ಪ್ರತಿಭಟನೆಗಳನ್ನು ನಡೆಸಿದರು. ಪರೀಕ್ಷಾ ವ್ಯವಸ್ಥೆಯಲ್ಲಿ ಸುಧಾರಣೆ, ಹೊಣೆಗಾರಿಕೆ ಹಾಗೂ ನ್ಯಾಯಸಮ್ಮತ ಕ್ರಮಗಳನ್ನು ಕೈಗೊಳ್ಳುವಂತೆ ಒತ್ತಾಯಿಸಲಾಯಿತು.

ಈ ಪ್ರತಿಭಟನೆಗಳಿಗೆ ದೆಹಲಿಯ ಜಂತರ್ ಮಂತರ್ ಕೇಂದ್ರಬಿಂದುವಾಗಿದ್ದು, ಕಾಕ್ರೋಚ್ ಜನತಾ ಪಾರ್ಟಿ (ಅಎಕ) ನೇತೃತ್ವದಲ್ಲಿ ಹಲವು ದಿನಗಳ ಕಾಲ ನಿರಂತರ ಪ್ರತಿಭಟನೆ ನಡೆಯಿತು. ಪ್ರತಿಭಟನಾಕಾರರು ಪರೀಕ್ಷಾ ವ್ಯವಸ್ಥೆಯಲ್ಲಿ ಸಂಪೂರ್ಣ ಪಾರದರ್ಶಕತೆ, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಹಾಗೂ ವಿದ್ಯಾರ್ಥಿಗಳ ಭವಿಷ್ಯವನ್ನು ರಕ್ಷಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು.

### ಹೆಚ್ಚುವರಿ ಜವಾಬ್ದಾರಿ ಪ್ರಲ್ಹಾದ್ ಜೋಶಿಗೆ

ಧರ್ಮೇಂದ್ರ ಪ್ರಧಾನ ಅವರ ರಾಜೀನಾಮೆಯ ನಂತರ, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರಿಗೆ ಕೇಂದ್ರ ಶಿಕ್ಷಣ ಸಚಿವಾಲಯದ ಹೆಚ್ಚುವರಿ ಜವಾಬ್ದಾರಿಯನ್ನು ತಾತ್ಕಾಲಿಕವಾಗಿ ವಹಿಸಲಾಗಿದೆ. ಸರ್ಕಾರ ಶೀಘ್ರದಲ್ಲೇ ಶಿಕ್ಷಣ ಸಚಿವಾಲಯದ ಮುಂದಿನ ಕಾರ್ಯತಂತ್ರ ಮತ್ತು ಶಾಶ್ವತ ನೇಮಕಾತಿಯ ಕುರಿತು ನಿರ್ಧಾರ ಕೈಗೊಳ್ಳುವ ನಿರೀಕ್ಷೆಯಿದೆ.

### ಶಿಕ್ಷಣ ಕ್ಷೇತ್ರದಲ್ಲಿ ಸುಧಾರಣೆಗೆ ನಿರೀಕ್ಷೆ

ಈ ಬೆಳವಣಿಗೆಯ ಹಿನ್ನೆಲೆಯಲ್ಲಿ ದೇಶದ ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಣ ಕ್ಷೇತ್ರದ ತಜ್ಞರು ಪರೀಕ್ಷಾ ವ್ಯವಸ್ಥೆಯಲ್ಲಿ ಸಮಗ್ರ ಸುಧಾರಣೆ, ಪ್ರಶ್ನೆಪತ್ರಿಕೆ ಸೋರಿಕೆ ತಡೆಗೆ ಕಠಿಣ ಕ್ರಮಗಳು ಹಾಗೂ ವಿದ್ಯಾರ್ಥಿಗಳ ವಿಶ್ವಾಸವನ್ನು ಪುನಃಸ್ಥಾಪಿಸುವ ನಿರೀಕ್ಷೆ ವ್ಯಕ್ತಪಡಿಸಿದ್ದಾರೆ.

ಶಿಕ್ಷಣ ವ್ಯವಸ್ಥೆಯ ಪಾರದರ್ಶಕತೆ, ಉತ್ತರದಾಯಿತ್ವ ಮತ್ತು ಗುಣಮಟ್ಟವನ್ನು ಮತ್ತಷ್ಟು ಬಲಪಡಿಸಲು ಕೇಂದ್ರ ಸರ್ಕಾರ ಕೈಗೊಳ್ಳುವ ಮುಂದಿನ ಕ್ರಮಗಳತ್ತ ದೇಶದ ಗಮನ ಕೇಂದ್ರೀಕೃತವಾಗಿದೆ.

# ಪರೀಕ್ಷಾ ವ್ಯವಸ್ಥೆಯಲ್ಲಿ ಮಹತ್ವದ ಸುಧಾರಣೆ: ನಂದನ್ ನಿಲೇಕಣಿ ನೇತೃತ್ವದಲ್ಲಿ ಉನ್ನತಮಟ್ಟದ ಕಾರ್ಯಪಡೆ ರಚನೆ–ಪ್ರಧಾನಿ ಮೋದಿ ಘೋಷಣೆ



ನವದೆಹಲಿ: ದೇಶದ ಪರೀಕ್ಷಾ ವ್ಯವಸ್ಥೆಯನ್ನು ಇನ್ನಷ್ಟು ಪಾರದರ್ಶಕ, ವಿಶ್ವಾಸಾರ್ಹ ಮತ್ತು ತಂತ್ರಜ್ಞಾನ ಆಧಾರಿತವಾಗಿಸಲು ಕೇಂದ್ರ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದೆ. ಇನ್ಫೋಸಿಸ್‌ನ ಸಹ–ಸಂಸ್ಥಾಪಕ ಹಾಗೂ ತಂತ್ರಜ್ಞಾನ ತಜ್ಞ ನಂದನ್ ನಿಲೇಕಣಿ ಅವರ ನೇತೃತ್ವದಲ್ಲಿ ಉನ್ನತ ಮಟ್ಟದ ಕಾರ್ಯಪಡೆಯನ್ನು ರಚಿಸಲಾಗಿದ್ದು, ಕಾರ್ಯಪಡೆ ಸಲ್ಲಿಸುವ ವರದಿಯ ಆಧಾರದ ಮೇಲೆ ದೇಶದ ಪರೀಕ್ಷಾ ವ್ಯವಸ್ಥೆಯಲ್ಲಿ ಸಮಗ್ರ ಸುಧಾರಣೆಗಳನ್ನು ಜಾರಿಗೊಳಿಸಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ರವಿವಾರ ಪ್ರಕಟಿಸಿದ್ದಾರೆ.

ವೀಡಿಯೊ ಸಂದೇಶದ ಮೂಲಕ ದೇಶವನ್ನು ದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ವಿದ್ಯಾರ್ಥಿ ಗಳ ಭವಿಷ್ಯವನ್ನು ರಕ್ಷಿಸುವುದು ಕೇಂದ್ರ ಸರ್ಕಾರದ ಪ್ರಮುಖ ಆದ್ಯತೆಯಾಗಿದ್ದು, ಪರೀಕ್ಷಾ ವ್ಯವಸ್ಥೆಯ ಮೇಲಿನ ಸಾರ್ವಜನಿಕರ ವಿಶ್ವಾಸವನ್ನು ಮರು ಸ್ಥಾಪಿಸಲು ಸರ್ಕಾರ ಬದ್ಧವಾಗಿದೆ ಎಂದು ಹೇಳಿದರು.

"ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಆಟವಾಡಿದವರು ಇಂದು ಜೈಲು ಸೇರಿದ್ದಾರೆ. ಪರೀಕ್ಷಾ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳ ತ್ವರಿತ ವಿಚಾರಣೆಗೆ ಫಾಸ್ಟ್–ಟ್ರ್ಯಾಕ್ ನ್ಯಾಯಾಲಯಗಳನ್ನು ಸ್ಥಾಪಿಸ ಲಾಗಿದೆ. ಇಂತಹ ಅಪರಾಧಗಳಿಗೆ ಕಠಿಣ ಶಿಕ್ಷೆ ವಿಧಿಸುವ ಹೊಸ ಕಾನೂನು ರೂಪಿಸುವ ಕಾರ್ಯ ವೂ ಪ್ರಗತಿಯಲ್ಲಿದ್ದು, ಈ ವಿಷಯದಲ್ಲಿ ಸಂಸತ್ತಿ ನಲ್ಲಿಯೂ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ" ಎಂದು ಪ್ರಧಾನಿ ತಿಳಿಸಿದರು.

ಪ್ರಧಾನಿಯವರ ಘೋಷಣೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಯ ನಂತರ ಬಂದಿದೆ. ಇತ್ತೀಚಿನ ದಿನಗಳಲ್ಲಿ ದೇಶದ ವಿವಿಧ ಭಾಗಗಳಲ್ಲಿ ನಡೆದ ಪರೀಕ್ಷಾ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳು ವಿದ್ಯಾರ್ಥಿಗಳು ಹಾಗೂ ಪೋಷಕರಲ್ಲಿ ತೀವ್ರ ಆತಂಕ ಉಂಟುಮಾಡಿದ್ದವು. ಈ ಹಿನ್ನೆಲೆ ಪರೀಕ್ಷಾ ವ್ಯವಸ್ಥೆಯಲ್ಲಿ ಮೂಲಭೂತ ಬದಲಾವಣೆಗಳ ಅಗತ್ಯತೆ ಹೆಚ್ಚಾಗಿ ವ್ಯಕ್ತವಾಗಿತ್ತು.

ಪ್ರಧಾನಿಯವರ ಪ್ರಕಾರ, ಸರ್ಕಾರದ ಉದ್ದೇಶ ದೇಶದ ಪರೀಕ್ಷಾ ವ್ಯವಸ್ಥೆಯನ್ನು ಪಾರದರ್ಶಕ, ವಿಶ್ವಾಸಾರ್ಹ, ಸುರಕ್ಷಿತ ಹಾಗೂ ಅತ್ಯಾಧುನಿಕ ತಂತ್ರ ಜ್ಞಾನ ಆಧಾರಿತ ವ್ಯವಸ್ಥೆಯಾಗಿ ರೂಪಿಸುವುದಾಗಿದೆ. ಇದೇ ಉದ್ದೇಶದಿಂದ

ಮುಂದಿನ ಪುಟಕ್ಕೆ

# ಬೆಂಗಳೂರು ಫುಟ್‌ಪಾತ್ ತೆರವು ಕಾರ್ಯಾಚರಣೆ ವೇಳೆ GBA ಅಧಿಕಾರಿ ಮೇಲೆ ಹಲ್ಲೆ






ಬೆಂಗಳೂರು: ನಗರದ ವಿವಿಧ ಭಾಗಗಳಲ್ಲಿ ಸಾರ್ವಜನಿಕರ ಸುರಕ್ಷಿತ ಸಂಚಾರಕ್ಕಾಗಿ ಉಃಂ ಕೈಗೊಂಡಿರುವ ಫುಟ್‌ಪಾತ್ ಅತಿಕ್ರಮಣ ತೆರವು ಕಾರ್ಯಾಚರಣೆ ವೇಳೆ ಬಿಬಿಎಂಪಿಯೊಬ್ಬ ಅಧಿಕಾರಿಯ ಮೇಲೆ ಹಲ್ಲೆ ನಡೆದಿರುವ ಘಟನೆ ವರದಿಯಾಗಿದೆ.

ಅಕ್ರಮವಾಗಿ ಫುಟ್‌ಪಾತ್‌ಗಳನ್ನು ಅತಿಕ್ರಮಿಸಿ ನಿರ್ಮಿಸಲಾಗಿದ್ದ ಕಟ್ಟಡಗಳು, ಅಂಗಡಿಗಳು ಹಾಗೂ ಇತರ ಅಡೆತಡೆಗಳನ್ನು ತೆರವುಗೊಳಿಸುವ ಕಾರ್ಯಾಚರಣೆಯ ವೇಳೆ ಕೆಲವರು ಅಧಿಕಾರಿಗಳ ಕರ್ತವ್ಯಕ್ಕೆ ಅಡ್ಡಿಪಡಿಸಿ, GBA ಅಧಿಕಾರಿಯ ಮೇಲೆ ಹಲ್ಲೆ ನಡೆಸಿದ್ದಾರೆ ಎನ್ನಲಾಗಿದೆ. ಗಾಯಗೊಂಡ ಅಧಿಕಾರಿಗೆ ತಕ್ಷಣ ಚಿಕಿತ್ಸೆ ನೀಡಲಾಗಿದ್ದು, ಸ್ಥಳಕ್ಕೆ ಪೊಲೀಸರು ಆಗಮಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದರು.

ಘಟನೆ ಸಂಬಂಧ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ಸಾರ್ವಜನಿಕ ಸೇವೆಯಲ್ಲಿದ್ದ ಅಧಿಕಾರಿಯ ಮೇಲೆ ಹಲ್ಲೆ ನಡೆಸಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಪ್ರಕ್ರಿಯೆ ಆರಂಭಿಸಿದ್ದಾರೆ.

ಬಿಬಿಎಂಪಿ ಅಧಿಕಾರಿಗಳು ನಗರದಲ್ಲಿನ ಫುಟ್‌ಪಾತ್‌ಗಳನ್ನು ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸುವ ಕಾರ್ಯಾಚರಣೆ ಮುಂದುವರಿಯಲಿದೆ ಎಂದು ಸ್ಪಷ್ಟಪಡಿಸಿದ್ದು, ಪಾದಚಾರಿಗಳ ಹಕ್ಕು ಹಾಗೂ ರಸ್ತೆ ಸುರಕ್ಷತೆಯನ್ನು ಕಾಪಾಡಲು ಅತಿಕ್ರಮಣ ತೆರವು ಕಾರ್ಯವನ್ನು ಇನ್ನಷ್ಟು ತೀವ್ರಗೊಳಿಸಲಾಗುವುದು ಎಂದು ತಿಳಿಸಿದ್ದಾರೆ.

### ಮುಖ್ಯಾಂಶಗಳು:

–ಬೆಂಗಳೂರಿನಲ್ಲಿ ಫುಟ್‌ಪಾತ್ ಅತಿಕ್ರಮಣ ತೆರವು ಕಾರ್ಯಾಚರಣೆ.

–ಕಾರ್ಯಾಚರಣೆ ವೇಳೆ ಬಿಬಿಎಂಪಿ ಅಧಿಕಾರಿಯ ಮೇಲೆ ಹಲ್ಲೆ.

–ಗಾಯಗೊಂಡ ಅಧಿಕಾರಿಗೆ ಚಿಕಿತ್ಸೆ.

–ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ಆರಂಭ.

–ಅತಿಕ್ರಮಣ ತೆರವು ಕಾರ್ಯಾಚರಣೆ ಮುಂದುವರಿಸುವುದಾಗಿ ಬಿಬಿಎಂಪಿ ಸ್ಪಷ್ಟನೆ.

# ರೈತರಿಗೆ ಸಿಹಿ ಸುದ್ದಿ: ಕೇಂದ್ರ ಸರ್ಕಾರದಿಂದ ಪಿಎಂ–ಕಿಸಾನ್ ಯೋಜನೆಯ ಮುಂದಿನ ಕಂತು ಬಿಡುಗಡೆಗೆ ಸಿದ್ಧತೆ...

ನವದೆಹಲಿ, ಜುಲೈ 27: ದೇಶದ ಕೋಟ್ಯಂತರ ರೈತರಿಗೆ ಕೇಂದ್ರ ಸರ್ಕಾರದಿಂದ ಮತ್ತೊಂದು ಸಂತಸದ ಸುದ್ದಿ ಸಿಗುವ ಸಾಧ್ಯತೆ ಇದೆ. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ (PM-KISAN) ಯೋಜನೆಯ ಮುಂದಿನ ಕಂತಿನ ಹಣವನ್ನು ಶೀಘ್ರದಲ್ಲೇ ಅರ್ಹ ರೈತರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡುವ ಪ್ರಕ್ರಿಯೆ ನಡೆಯುತ್ತಿದೆ.

ಈ ಯೋಜನೆಯಡಿ ಅರ್ಹ ರೈತ ಕುಟುಂಬಗಳಿಗೆ ವರ್ಷಕ್ಕೆ 6,000 ಹಣಕಾಸು ನೆರವು ನೀಡಲಾಗುತ್ತದೆ. ಈ ಮೊತ್ತವನ್ನು ಮೂರು ಸಮಾನ ಕಂತುಗಳಲ್ಲಿ (ಪ್ರತಿ ಕಂತಿಗೆ 2,000) ನೇರವಾಗಿ ರೈತರ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುತ್ತದೆ.

ಕೇಂದ್ರ ಕೃಷಿ ಸಚಿವಾಲಯದ ಸೂಚನೆಯಂತೆ, ರೈತರು ತಮ್ಮ ಜ–ಏಜಅ, ಆಧಾರ್?ಬ್ಯಾಂಕ್ ಖಾತೆ ಜೋಡಣೆ ಹಾಗೂ ಭೂ ದಾಖಲೆಗಳ ಪರಿಶೀಲನೆ ಪೂರ್ಣಗೊಳಿಸಿರುವುದು ಅಗತ್ಯ. ಈ ಪ್ರಕ್ರಿಯೆ ಪೂರ್ಣಗೊಂಡಿರುವ ರೈತರಿಗೆ ಮಾತ್ರ ಮುಂದಿನ ಕಂತಿನ ಹಣ ಬಿಡುಗಡೆಯಾಗಲಿದೆ.

ಕೃಷಿ ತಜ್ಞರ ಪ್ರಕಾರ, ಈ ನೆರವು ರೈತರಿಗೆ ಬೀಜ,



ರಸಗೊಬ್ಬರ, ಕೀಟನಾಶಕ ಖರೀದಿ ಸೇರಿದಂತೆ ಕೃಷಿ ಚಟುವಟಿಕೆಗಳಿಗೆ ಆರ್ಥಿಕ ಸಹಾಯವಾಗಲಿದೆ.

### ರೈತರಿಗೆ ಸಲಹೆಗಳು:

-e-KYC ಪೂರ್ಣಗೊಳಿಸಿ.

–ಆಧಾರ್ ಸಂಖ್ಯೆ ಬ್ಯಾಂಕ್ ಖಾತೆಗೆ ಲಿಂಕ್ ಆಗಿದೆಯೇ ಎಂದು ಪರಿಶೀಲಿಸಿ.

–ಭೂ ದಾಖಲೆಗಳ ವಿವರಗಳನ್ನು ನವೀಕರಿಸಿ.

-PM-KISAN ಅಧಿಕೃತ ಪೋರ್ಟಲ್‌ನಲ್ಲಿ ಅರ್ಜಿ ಸ್ಥಿತಿಯನ್ನು ಪರಿಶೀಲಿಸಿ.

ಕೇಂದ್ರ ಸರ್ಕಾರದ ಈ ಯೋಜನೆ ದೇಶದ ಸಣ್ಣ ಮತ್ತು ಅತಿಸಣ್ಣ ರೈತರ ಆರ್ಥಿಕ ಸ್ಥಿತಿಯನ್ನು ಬಲಪಡಿಸುವ ಪ್ರಮುಖ ಯೋಜನೆಗಳಲ್ಲಿ ಒಂದಾಗಿದೆ.

■ ಸ್ವರ್ಣ ಭಾರತ್ ಟೈಮ್ಸ್
Voice of the People- Vision of the Nation

ವಿಶ್ವಪ್ರಸಿದ್ಧ ತಂತ್ರಜ್ಞಾನ ತಜ್ಞ ನಂದನ್ ನಿಲೇಕಣಿ ಅವರ ನೇತೃತ್ವದಲ್ಲಿ ಕಾರ್ಯಪಡೆಯನ್ನು ರಚಿಸಲಾಗಿದೆ.

ಈ ಕಾರ್ಯಪಡೆ ದೇಶದ ಪ್ರಸ್ತುತ ಪರೀಕ್ಷಾ ವ್ಯವಸ್ಥೆಯ ಸಂಪೂರ್ಣ ಪರಿಶೀಲನೆ ನಡೆಸಿ, ಪ್ರಶ್ನೆಪತ್ರಿಕೆ ಭದ್ರತೆ, ಡಿಜಿಟಲ್ ಮೇಲ್ವಿಚಾರಣೆ, ಪರೀಕ್ಷಾ ನಿರ್ವಹಣೆ, ಅಭ್ಯರ್ಥಿಗಳ ಸುರಕ್ಷತೆ ಹಾಗೂ ತಂತ್ರಜ್ಞಾನ ಬಳಕೆಯ ಕುರಿತು ಸಮಗ್ರ ಶಿಫಾರಸುಗಳನ್ನು ಸರ್ಕಾರಕ್ಕೆ ಸಲ್ಲಿಸಲಿದೆ. ವರದಿಯನ್ನು ಸಾಧ್ಯವಾದಷ್ಟು ಶೀಘ್ರದಲ್ಲಿ ಸಲ್ಲಿಸಲು ಸೂಚಿಸಲಾಗಿದ್ದು, ಅದರ ಶಿಫಾರಸುಗಳ ಆಧಾರದ ಮೇಲೆ ಮುಂಬರುವ



ಎಲ್ಲಾ ಪ್ರಮುಖ ಪರೀಕ್ಷೆಗಳಲ್ಲಿ ಸುಧಾರಣಾ ಕ್ರಮಗಳನ್ನು ಜಾರಿಗೆ ತರಲಾಗುವುದು.

ಶಿಕ್ಷಣ ತಜ್ಞರು ಮತ್ತು ವಿದ್ಯಾರ್ಥಿ ಸಂಘಟನೆಗಳು ಸರ್ಕಾರದ ಈ ನಿರ್ಧಾರವನ್ನು ಸ್ವಾಗತಿಸಿದ್ದು, ಪರೀಕ್ಷಾ ವ್ಯವಸ್ಥೆಯ ವಿಶ್ವಾಸಾರ್ಹತೆಯನ್ನು ಪುನಃ ಸ್ಥಾಪಿಸುವ ನಿಟ್ಟಿನಲ್ಲಿ ಇದು ಮಹತ್ವದ ಹೆಜ್ಜೆಯಾಗಲಿದೆ ಎಂಬ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

### ಮುಖ್ಯಾಂಶಗಳು

–ನಂದನ್ ನಿಲೇಕಣಿ ನೇತೃತ್ವದಲ್ಲಿ ಉನ್ನತ ಮಟ್ಟದ ಕಾರ್ಯಪಡೆ ರಚನೆ.

– ದೇಶದ ಪರೀಕ್ಷಾ ವ್ಯವಸ್ಥೆಯ ಸಮಗ್ರ ಪರಿಶೀಲನೆ.

–ಪ್ರಶ್ನೆಪತ್ರಿಕೆ ಸೋರಿಕೆ ತಡೆಯಲು ತಂತ್ರಜ್ಞಾನ ಆಧಾರಿತ ಶಿಫಾರಸುಗಳು.

–ಫಾಸ್ಟ್–ಟ್ರ್ಯಾಕ್ ನ್ಯಾಯಾಲಯಗಳ ಮೂಲಕ ಪ್ರಕರಣಗಳ ತ್ವರಿತ ವಿಚಾರಣೆ.

–ಕಠಿಣ ಶಿಕ್ಷೆ ವಿಧಿಸುವ ಹೊಸ ಕಾನೂನು ರೂಪಿಸುವ ಪ್ರಕ್ರಿಯೆ.

–ಕಾರ್ಯಪಡೆ ವರದಿ ಆಧರಿಸಿ ಮುಂಬರುವ ಪರೀಕ್ಷೆಗಳಲ್ಲಿ ಸುಧಾರಣೆ ಜಾರಿ.

■ ಸ್ವರ್ಣ ಭಾರತ್ ಟೈಮ್ಸ್

# ರಾಜ್ಯದ ಹವಾಮಾನ ವರದಿ 29–07–2026




ಮುಂದಿನ 7 ದಿನಗಳ ಕಾಲ ರಾಜ್ಯಾದ್ಯಂತ ಗುಡುಗು, ಸಿಡಿಲು ಸಹಿತ ಜೋರಾದ ಗಾಳಿಯೊಂದಿಗೆ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕರಾವಳಿ ಭಾಗ ಹಾಗೂ ಮಲೆನಾಡು ಜಿಲ್ಲೆಗಳಿಗೆ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಹಾಗೂ ಒಳನಾಡು ಜಿಲ್ಲೆಗಳಲ್ಲಿ ಮೋಡ ಕವಿದ ವಾತಾವರಣ ಇರಲಿದೆ ಎಂದು ವರದಿ ಮಾಡಿದೆ.

ಬೆಂಗಳೂರಿನಲ್ಲಿ ಗರಿಷ್ಠ ತಾಪಮಾನ 27 ಡಿಗ್ರಿ ಸೆಲ್ಸಿಯಸ್ ಇರಲಿದ್ದು, ಕನಿಷ್ಠ ತಾಪಮಾನ 22 ಡಿಗ್ರಿ ಸೆಲ್ಸಿಯಸ್ ದಾಖಲಾಗಲಿದೆ. ಮಡಿಕೇರಿಯಲ್ಲಿ ಗರಿಷ್ಠ ತಾಪಮಾನ 23 ಡಿಗ್ರಿ ಸೆಲ್ಸಿಯಸ್ ಇರಲಿದ್ದು, ಕನಿಷ್ಠ ತಾಪಮಾನ 21 ಡಿಗ್ರಿ ಸೆಲ್ಸಿಯಸ್ ದಾಖಲಾಗಲಿದೆ.

# ಬೆಂಗಳೂರು ಸಾರ್ವಜನಿಕ ಶೌಚಾಲಯಗಳ ದುಸ್ಥಿತಿ ಬಯಲಿಗೆಳೆದ ಬಿ.ಪ್ಯಾಕ್ ಆಡಿಟ್ ವರದಿ




ಬೆಂಗಳೂರು, ಜುಲೈ 2026: ಬೆಂಗಳೂರು ನಗರದ ಸಾರ್ವಜನಿಕ ಶೌಚಾಲಯಗಳ ಸ್ಥಿತಿಗತಿಗಳ ಕುರಿತು ಬೆಂಗಳೂರು ಪಾಲಿಟಿಕಲ್ ಆಕ್ಷನ್ ಕಮಿಟಿ (B.PAC) ಬಿಡುಗಡೆ ಮಾಡಿದ "ಬೆಂಗಳೂರು ಪಬ್ಲಿಕ್ ಟಾಯ್ಲೆಟ್ ಆಡಿಟ್ ರಿಪೋರ್ಟ್ 2026" ಆತಂಕಕಾರಿ ವಾಸ್ತವಗಳನ್ನು ಬಹಿರಂಗಪಡಿಸಿದೆ. ಗ್ರೇಟರ್ ಬೆಂಗಳೂರು ಅಥಾರಿಟಿ (GBA) ವ್ಯಾಪ್ತಿಯ 142 ಸಾರ್ವಜನಿಕ ಶೌಚಾಲಯಗಳ ಸಮಗ್ರ ಪರಿಶೀಲನೆ ನಡೆಸಿ, ಸ್ವಚ್ಛತೆ, ಕಾರ್ಯನಿರ್ವಹಣೆ, ಸುರಕ್ಷತೆ, ಪ್ರವೇಶಸೌಲಭ್ಯ ಹಾಗೂ ನಾಗರಿಕರ ಅನುಭವದ ಆಧಾರದ ಮೇಲೆ ಈ ವರದಿಯನ್ನು ಸಿದ್ಧಪಡಿಸಲಾಗಿದೆ.

ನಗರದ ಜನಸಂಖ್ಯೆ 1.4 ಕೋಟಿಗೂ ಹೆಚ್ಚು ಇದ್ದರೂ, ಸಾರ್ವಜನಿಕ ಶೌಚಾಲಯಗಳ ಸಂಖ್ಯೆ ಅಗತ್ಯಕ್ಕಿಂತ ತುಂಬಾ ಕಡಿಮೆಯಿದೆ. ನಗರದಲ್ಲಿ ಒಟ್ಟು ಸುಮಾರು 800–900 ಸಾರ್ವಜನಿಕ ಶೌಚಾಲಯಗಳು ಮಾತ್ರ ಇದ್ದು, ಅಧಿಕೃತವಾಗಿ GBA ಪಟ್ಟಿಯಲ್ಲಿ 479 ಶೌಚಾಲಯಗಳು ದಾಖಲಾಗಿವೆ. ಇದರಿಂದ ಸರಾಸರಿ 25,000 ರಿಂದ 30,000 ಜನರಿಗೆ ಒಂದೇ ಸಾರ್ವಜನಿಕ ಶೌಚಾಲಯ ಲಭ್ಯವಾಗುತ್ತಿರುವುದು ವರದಿಯಲ್ಲಿ ಉಲ್ಲೇಖಿಸಲಾಗಿದೆ.

### ಆಡಿಟ್‌ನ ಪ್ರಮುಖ ಅಂಶಗಳು

–ಪರಿಶೀಲಿಸಲಾದ 142 ಶೌಚಾಲಯಗಳಲ್ಲಿ 37 (26%) ಸಂಪೂರ್ಣವಾಗಿ ಕಾರ್ಯ ನಿರ್ವಹಿಸುತ್ತಿಲ್ಲ.

–ಕೇವಲ 6 ಶೌಚಾಲಯಗಳು (4.2%) ಮಾತ್ರ ಅತ್ಯಂತ ಸ್ವಚ್ಛ ಎಂದು ಮೌಲ್ಯಮಾಪನಗೊಂಡಿವೆ.

–58% ಶೌಚಾಲಯಗಳಲ್ಲಿ ದುರ್ವಾಸನೆ ನಿರಂತರವಾಗಿ ಕಂಡುಬಂದಿದೆ.

–ಕೇವಲ 56% ಶೌಚಾಲಯಗಳಲ್ಲಿ ಸಮರ್ಪಕ ಬೆಳಕಿನ ವ್ಯವಸ್ಥೆ ಇದ್ದು, ಮಹಿಳೆಯರ ಸುರಕ್ಷತೆ ಕುರಿತು ಆತಂಕ ವ್ಯಕ್ತವಾಗಿದೆ.

–9 ಶೌಚಾಲಯಗಳಲ್ಲಿ ಮಾತ್ರ ವೀಲ್‌ಚೇರ್ ರ್ಯಾಂಪ್ ಇದ್ದು, ಶೇ.94ಕ್ಕೂ ಹೆಚ್ಚು ಶೌಚಾಲಯಗಳು ಅಂಗವಿಕಲರಿಗೆ ಸುಲಭವಾಗಿ ಪ್ರವೇಶಿಸಲು ಅನುಕೂಲಕರವಾಗಿಲ್ಲ.

–ಕಾರ್ಯನಿರ್ವಹಿಸುತ್ತಿರುವ ಶೌಚಾಲಯಗಳಲ್ಲಿ ಕೇವಲ 40%ರಲ್ಲಿ ಮಾತ್ರ ನೀರಿನ ಸೌಲಭ್ಯ ಲಭ್ಯವಿದೆ.

–ಬಹುತೇಕ ಶೌಚಾಲಯಗಳಲ್ಲಿ ಸಾಬೂನು ಡಿಸ್ಪೆನ್ಸರ್ ಹಾಗೂ ಕಸದ ಬುಟ್ಟಿಗಳೇ ಇಲ್ಲ.

–ಶೌಚಾಲಯಗಳ ನಿರ್ವಹಣೆಯಲ್ಲಿ ಮಹಿಳಾ ಸಿಬ್ಬಂದಿಯ ಪ್ರಮಾಣ ಕೇವಲ 15% ಮಾತ್ರವಾಗಿದೆ.

–ಗುತ್ತಿಗೆದಾರರ ವಿವರಗಳು ಹಾಗೂ ಬಳಕೆ ಶುಲ್ಕದ ಮಾಹಿತಿ ಬಹುತೇಕ ಕಡೆ ಪ್ರದರ್ಶಿಸದಿರುವುದು ಪಾರದರ್ಶಕತೆಗೆ ಧಕ್ಕೆಯಾಗಿದೆ.

### ವರದಿಯ ಶಿಫಾರಸುಗಳು

ಬಿ.ಪ್ಯಾಕ್ ನಗರದಲ್ಲಿ ಸಾರ್ವಜನಿಕ ಶೌಚಾಲಯ ಗಳ ಗುಣಮಟ್ಟ ಸುಧಾರಿಸಲು ಹಲವು ಪ್ರಮುಖ ಸಲಹೆಗಳನ್ನು ನೀಡಿದೆ. ಕಾರ್ಯನಿರ್ವಹಿಸದ ಶೌಚಾಲಯಗಳನ್ನು 30 ದಿನಗಳ ತುರ್ತು ಅಭಿಯಾನ ಮೂಲಕ ದುರಸ್ತಿ ಮಾಡುವುದು, ಏಕೀಕೃತ ಸಾರ್ವಜನಿಕ ಶೌಚಾಲಯ ನಿರ್ವಹಣಾ ಘಟಕ ಸ್ಥಾಪಿಸುವುದು, ದೀರ್ಘಾವಧಿಯ ಕಾರ್ಯಾಚರಣೆ ಮತ್ತು ನಿರ್ವಹಣಾ (O&M) ಒಪ್ಪಂದಗಳನ್ನು ಜಾರಿಗೆ ತರುವುದು, ನಿರಂತರ ನೀರು, ವಿದ್ಯುತ್, ಸಾಬೂನು, ಕಸದ ಬುಟ್ಟಿಗಳ ವ್ಯವಸ್ಥೆ ಕಲ್ಪಿಸುವುದು, ಅಂಗವಿಕಲ ಸ್ನೇಹಿ ಹಾಗೂ ಮಹಿಳಾ ಸುರಕ್ಷತೆಯ ದೃಷ್ಟಿಯಿಂದ ಶೌಚಾಲಯಗಳನ್ನು ಅಭಿವೃದ್ಧಿಪಡಿಸುವುದು ಮತ್ತು ಗುತ್ತಿಗೆದಾರರ ವಿವರಗಳನ್ನು ಸಾರ್ವಜನಿಕವಾಗಿ ಪ್ರದರ್ಶಿಸುವಂತೆ ಶಿಫಾರಸು ಮಾಡಲಾಗಿದೆ.

■ ಸ್ವರ್ಣ ಭಾರತ್ ಟೈಮ್

# ಸಮಾಜಸೇವೆಯ ಸಾಧನೆಗೆ ಅಂತರರಾಷ್ಟ್ರೀಯ ಗೌರವ ಡಾ. ಕುಮಾರ್ ಪಿ.ಎಸ್. ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ



ಬೆಂಗಳೂರು: ಸಮಾಜದ ಒಳಿತಿಗಾಗಿ ಒಂದು ದಶಕಕ್ಕೂ ಹೆಚ್ಚು ಕಾಲ ನಿರಂತರವಾಗಿ ಶ್ರಮಿಸುತ್ತಿರುವ ಸಮಾಜಸೇವಕ ಡಾ. ಕುಮಾರ್ ಪಿ.ಎಸ್. ಅವರಿಗೆ ಏಷ್ಯಾ ಇಂಟರ್‌ನ್ಯಾಷನಲ್ ಕಲ್ಚರ್ ರಿಸರ್ಚ್ ಯೂನಿವರ್ಸಿಟಿ ವತಿಯಿಂದ ಗೌರವ ಡಾಕ್ಟರೇಟ್ (Honorary Doctorate) ನೀಡಿ ಸನ್ಮಾನಿಸಲಾಗಿದೆ.

ಸಮಾಜದ ದುರ್ಬಲ ವರ್ಗಗಳ ಅಭಿವೃದ್ಧಿ, ಮಾನವೀಯ ಸೇವೆ, ಸಾರ್ವಜನಿಕ ಕಲ್ಯಾಣ ಹಾಗೂ ಸಾಮಾಜಿಕ ಜಾಗೃತಿ ಮೂಡಿಸುವ ಕಾರ್ಯಗಳಲ್ಲಿ ಅವರು ಸಲ್ಲಿಸಿರುವ ಮಹತ್ವದ ಕೊಡುಗೆಯನ್ನು ಪರಿಗಣಿಸಿ ಈ ಗೌರವವನ್ನು ಪ್ರದಾನ ಮಾಡಲಾಗಿದೆ.

ಡಾ. ಕುಮಾರ್ ಪಿ.ಎಸ್. ಅವರು ಕಳೆದ 10ಕ್ಕೂ ಹೆಚ್ಚು ವರ್ಷಗಳಿಂದ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿದ್ದು, ಅವರ ಕಾರ್ಯಚಟುವಟಿಕೆಗಳು ಅನೇಕ ಜನರ ಜೀವನದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಕಾರಣವಾಗಿವೆ. ಅವರ ಸೇವಾ ಮನೋಭಾವ, ನಾಯಕತ್ವ ಮತ್ತು ಸಾಮಾಜಿಕ ಬದ್ಧತೆಯನ್ನು ಗುರುತಿಸಿ ಈ ಪ್ರತಿಷ್ಠಿತ ಗೌರವ ನೀಡಲಾಗಿದೆ.

ಈ ಗೌರವವು ಅವರ ವೈಯಕ್ತಿಕ ಸಾಧನೆ ಮಾತ್ರವಲ್ಲದೆ, ಸಮಾಜಸೇವೆಯ ಮಹತ್ವವನ್ನು ಮತ್ತೊಮ್ಮೆ ಎತ್ತಿಹಿಡಿಯುವಂತಾಗಿದೆ. ಮುಂದಿನ ದಿನಗಳಲ್ಲಿಯೂ ಅವರು ಇನ್ನಷ್ಟು ಸಮಾಜಮುಖಿ ಕಾರ್ಯಗಳನ್ನು ಕೈಗೊಂಡು ಜನಸೇವೆಯ ಮೂಲಕ ಹೊಸ ಮಾದರಿಯನ್ನು ನಿರ್ಮಿಸಲಿ ಎಂದು ಗಣ್ಯರು ಶುಭ ಹಾರೈಸಿದ್ದಾರೆ.

ಸ್ವರ್ಣ ಭಾರತ್ ಟೈಮ್ಸ್ ವತಿಯಿಂದ ಡಾ. ಕುಮಾರ್ ಪಿ.ಎಸ್. ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು.

# ಫ್ರೀಡಂ ಪಾರ್ಕ್ ವಿದ್ಯಾರ್ಥಿಗಳ ಹೋರಾಟಕ್ಕೆ ಅಧಿಕೃತ ತೆರೆ–ಶಿಕ್ಷಣ ಸುಧಾರಣೆಯ ಹೋರಾಟ ಮುಂದುವರಿಯಲಿದೆ




ಬೆಂಗಳೂರು, ಜುಲೈ 26: ಒಂದು ತಿಂಗಳಿಗೂ ಹೆಚ್ಚು ಕಾಲ ನಿರಂತರವಾಗಿ ನಡೆದ ವಿದ್ಯಾರ್ಥಿಗಳ ಹೋರಾಟಕ್ಕೆ ಭಾನುವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಅಧಿಕೃತವಾಗಿ ತೆರೆ ಬಿದ್ದರೂ, ಶಿಕ್ಷಣ ವ್ಯವಸ್ಥೆಯಲ್ಲಿ ಸಮಗ್ರ ಸುಧಾರಣೆಗಾಗಿ ನಡೆಯುವ ಜನಾಂದೋಲನ ಇದೀಗ ಹೊಸ ಹಂತಕ್ಕೆ ಪ್ರವೇಶಿಸಿದೆ ಎಂದು ಪ್ರತಿಭಟನಾ ಸಂಘಟಕರು ಘೋಷಿಸಿದರು.

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ಅವರು ರಾಜೀನಾಮೆ ನೀಡಿದ ಒಂದು ದಿನದ ಬಳಿಕ ಸಾವಿರಾರು ವಿದ್ಯಾರ್ಥಿಗಳು, ಯುವಕರು, ಸಾಮಾಜಿಕ ಹೋರಾಟಗಾರರು ಮತ್ತು ವಿವಿಧ ಸಂಘಟನೆಗಳ ಸದಸ್ಯರು ಫ್ರೀಡಂ ಪಾರ್ಕ್‌ನಲ್ಲಿ ಸೇರಿ ಈ ಬೆಳವಣಿಗೆಯನ್ನು ಮಹತ್ವದ ಗೆಲುವಾಗಿ ಆಚರಿಸಿದರು. ಆದರೆ, ಸಚಿವರ ರಾಜೀನಾಮೆಯೊಂದೇ ತಮ್ಮ ಹೋರಾಟದ ಅಂತಿಮ ಗುರಿಯಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಭಾನುವಾರದ ಕಾರ್ಯಕ್ರಮವು ಪ್ರತಿಭಟನೆಯಿಗಿಂತ ಸಂಭ್ರಮದ ವಾತಾವರಣದಲ್ಲಿ ನಡೆಯಿತು. ಹಿಪ್–ಹಾಪ್ ಕಲಾವಿದರು, ಬೀಟ್‌ಬಾಕ್ಸರ್‌ಗಳು, ಗಿಟಾರ್ ವಾದಕರು ಹಾಗೂ ಶಾಸ್ತ್ರೀಯ ಸಂಗೀತ ಕಲಾವಿದರು ತಮ್ಮ ಪ್ರದರ್ಶನ ನೀಡಿದರು. ಜೊತೆಗೆ, ವಿಶ್ವಶಾಂತಿಯ ಸಂದೇಶ ಸಾರುವ 'ಮೈತ್ರೀಂ ಭಜತ' ಎಂಬ ಸಂಸ್ಕೃತ ಗೀತೆಯನ್ನು ಸಮೂಹವಾಗಿ ಹಾಡುವ ಮೂಲಕ ಶಾಂತಿ ಮತ್ತು ಸಹಬಾಳ್ವೆಯ ಸಂದೇಶ ಸಾರಿದರು



SWARNA BHARAT TIMES Weekly Newspaper 30 July 2026 PRGI Registration No.: KNBIL/26/A5237

# ಐಸಿಸಿ ಟಿ20 ಶ್ರೇಯಾಂಕದಲ್ಲಿ ಭಾರತ ಮತ್ತೆ ನಂ.1

## ಜಿಂಬಾಬ್ವೆ ವಿರುದ್ಧದ ಸರಣಿ ಗೆಲುವಿನೊಂದಿಗೆ ಅಗ್ರಸ್ಥಾನ ಮರಳಿ ಪಡೆದ ಟೀಂ ಇಂಡಿಯಾ






ಹರಾರೆ, ಜುಲೈ 27: ಐರ್ಲೆಂಡ್ ಹಾಗೂ ಇಂಗ್ಲೆಂಡ್ ಪ್ರವಾಸಗಳಲ್ಲಿ ನಿರೀಕ್ಷಿತ ಪ್ರದರ್ಶನ ನೀಡಲು ವಿಫಲವಾಗಿದ್ದ ಭಾರತ ಕ್ರಿಕೆಟ್ ತಂಡ ಜಿಂಬಾಬ್ವೆ ಪ್ರವಾಸದಲ್ಲಿ ಭರ್ಜರಿ ಪುನರಾಗಮನ ಮಾಡಿದೆ. ಹರಾರೆಯಲ್ಲಿ ನಡೆದ ಎರಡನೇ ಟಿ20 ಪಂದ್ಯದಲ್ಲಿ ಆತಿಥೇಯ ಜಿಂಬಾಬ್ವೆಯನ್ನು 90 ರನ್‌ಗಳ ಭಾರೀ ಅಂತರದಿಂದ ಮಣಿಸಿದ ಭಾರತ, ಸರಣಿಯಲ್ಲಿ ತನ್ನ ಪ್ರಾಬಲ್ಯವನ್ನು ಮತ್ತೊಮ್ಮೆ ಸಾಬೀತುಪಡಿಸಿದೆ.

ಈ ಗೆಲುವಿನೊಂದಿಗೆ ಭಾರತ 268 ರೇಟಿಂಗ್ ಅಂಕಗಳನ್ನು ಪಡೆದು ಐಸಿಸಿ ಟಿ20 ಅಂತರ ರಾಷ್ಟ್ರೀಯ ತಂಡಗಳ ಶ್ರೇಯಾಂಕದಲ್ಲಿ ಮತ್ತೆ ನಂಬರ್ 1 ಸ್ಥಾನವನ್ನು ಅಲಂಕರಿಸಿದೆ. ಇದರಿಂದ ವಿಶ್ವ ಕ್ರಿಕೆಟ್‌ನಲ್ಲಿ ಭಾರತದ ಪ್ರಾಬಲ್ಯ ಮತ್ತೊಮ್ಮೆ ದೃಢಪಟ್ಟಿದೆ.

ಶ್ರೇಯಸ್ ಅಯ್ಯರ್ ನಾಯಕತ್ವದಲ್ಲಿ ಯುವ ಆಟಗಾರರನ್ನೊಳಗೊಂಡ ಭಾರತ ತಂಡ ಶಿಸ್ತುಬದ್ಧ ಆಟವಾಡಿ ಅಭಿಮಾನಿಗಳ ವಿಶ್ವಾಸವನ್ನು ಮರಳಿ ಗಳಿಸಿದೆ. ತಂಡದ ಕೋಚ್ ವಿವಿಎಸ್ ಲಕ್ಷ್ಮಣ್ ಅವರ ಮಾರ್ಗದರ್ಶನದಲ್ಲಿ ಯುವ ಆಟಗಾರರು ಆತ್ಮವಿಶ್ವಾಸದಿಂದ ಆಡಿದ್ದು, ವಿಶೇಷವಾಗಿ ಉದಯೋನ್ಮುಖ ಬ್ಯಾಟರ್ ವೈಭವ್ ಸೂರ್ಯ ವಂಶಿ ತಮ್ಮ ಆಕ್ರಮಣಕಾರಿ ಬ್ಯಾಟಿಂಗ್ ಮೂಲಕ ಎಲ್ಲರ ಗಮನ ಸೆಳೆದಿದ್ದಾರೆ.

ಬೌಲಿಂಗ್ ವಿಭಾಗದಲ್ಲಿಯೂ ಭಾರತೀಯ ಆಟಗಾರರು ಅತ್ಯುತ್ತಮ ಪ್ರದರ್ಶನ ನೀಡಿ ಜಿಂಬಾಬ್ವೆ ಬ್ಯಾಟರ್‌ಗಳನ್ನು ನಿಯಂತ್ರಿಸುವಲ್ಲಿ ಯಶಸ್ವಿಯಾದರು. ಆರಂಭದಲ್ಲೇ ವಿಕೆಟ್‌ಗಳನ್ನು ಕಬಳಿಸಿದ ಭಾರತೀಯ ಬೌಲರ್‌ಗಳು ಎದುರಾಳಿ ತಂಡಕ್ಕೆ ಯಾವುದೇ ಹಂತದಲ್ಲೂ ಚೇತರಿಸಿ ಕೊಳ್ಳುವ ಅವಕಾಶ ನೀಡಲಿಲ್ಲ. ಬ್ಯಾಟಿಂಗ್, ಬೌಲಿಂಗ್ ಹಾಗೂ ಫೀಲ್ಡಿಂಗ್ –ಮೂರು ವಿಭಾಗಗಳಲ್ಲಿಯೂ ಸಮತೋಲನದ ಪ್ರದರ್ಶನ ನೀಡಿದ ಭಾರತ ಭರ್ಜರಿ ಜಯ ದಾಖಲಿಸಿತು.

ಐರ್ಲೆಂಡ್ ಮತ್ತು ಇಂಗ್ಲೆಂಡ್ ವಿರುದ್ಧದ ಹಿನ್ನಡೆಯ ಬಳಿಕ ಭಾರತ ತಂಡದ ಮೇಲೆ ಹಲವು ಪ್ರಶ್ನೆಗಳು ಉದ್ಭವಿಸಿದ್ದವು. ಆದರೆ ಜಿಂಬಾಬ್ವೆ ಪ್ರವಾಸದಲ್ಲಿ ಸಂಘಟಿತ ಪ್ರದರ್ಶನ ನೀಡುವ ಮೂಲಕ ಟೀಂ ಇಂಡಿಯಾ ಟೀಕಾ ಕಾರರಿಗೆ ತಮ್ಮ ಆಟದ ಮೂಲಕವೇ ಉತ್ತರ ನೀಡಿದೆ.

ಈ ಸರಣಿ ಗೆಲುವು ಮುಂದಿನ ಪ್ರಮುಖ ಟಿ20 ಟೂರ್ನಿಗಳಿಗೆ ಭಾರತಕ್ಕೆ ಆತ್ಮವಿಶ್ವಾಸ ಹೆಚ್ಚಿಸುವುದರ ಜೊತೆಗೆ, ಯುವ ಆಟಗಾರರಿಗೆ ಅಂತರರಾಷ್ಟ್ರೀಯ ಮಟ್ಟದಲ್ಲಿ ತಮ್ಮ ಸಾಮರ್ಥ್ಯವನ್ನು ಪ್ರದರ್ಶಿಸಲು ಉತ್ತಮ ವೇದಿಕೆಯಾಗಿದೆ ಎಂದು ಕ್ರಿಕೆಟ್ ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಭಾರತದ ಈ ಸಾಧನೆ ದೇಶದ ಕೋಟ್ಯಾಂತರ ಕ್ರಿಕೆಟ್ ಅಭಿಮಾನಿಗಳಲ್ಲಿ ಹೊಸ ಉತ್ಸಾಹ ಮೂಡಿಸಿದ್ದು, ಮುಂದಿನ ಪಂದ್ಯಗಳ ಲ್ಲಿಯೂ ಇದೇ ಲಯವನ್ನು ಮುಂದುವರಿಸುವ ನಿರೀಕ್ಷೆ ವ್ಯಕ್ತವಾಗಿದೆ.

ಮುಖ್ಯಾಂಶಗಳು:

–ಭಾರತ ಐಸಿಸಿ ಟಿ20 ಶ್ರೇಯಾಂಕದಲ್ಲಿ ಮತ್ತೆ ನಂ.1

–268 ರೇಟಿಂಗ್ ಅಂಕಗಳೊಂದಿಗೆ ಅಗ್ರಸ್ಥಾನ

–ಜಿಂಬಾಬ್ವೆ ವಿರುದ್ಧದ 2ನೇ ಟಿ20 ಪಂದ್ಯದಲ್ಲಿ 90 ರನ್‌ಗಳ ಭರ್ಜರಿ ಜಯ

–ನಾಯಕ: ಶ್ರೇಯಸ್ ಅಯ್ಯರ್

–ಕೋಚ್: ವಿವಿಎಸ್ ಲಕ್ಷ್ಮಣ್

–ಯುವ ಬ್ಯಾಟರ್ ವೈಭವ್ ಸೂರ್ಯವಂಶಿ ಗಮನಾರ್ಹ ಪ್ರದರ್ಶನ

–ಸರಣಿ ಗೆಲುವಿನೊಂದಿಗೆ ಭಾರತದ ಆತ್ಮವಿಶ್ವಾಸ ಹೆಚ್ಚಳ

■ ಸ್ವರ್ಣ ಭಾರತ್ ಟೈಮ್ಸ್

# 'ಬಿಲ್ಲ ರಂಗ ಭಾಷಾ' ಶೂಟಿಂಗ್ ಬಗ್ಗೆ ಸಿಕ್ಕು ಹೊಸ ಮಾಹಿತಿ

ಕಿಚ್ಚ ಸುದೀಪ್ ಅಭಿನಯದ ಬಹುನಿರೀಕ್ಷಿತ 'ಬಿಲ್ಲ ರಂಗ ಭಾಷಾ' ಚಿತ್ರದ ಮೊದಲ ಶೆಡ್ಯೂಲ್ ಬಳಿಕ ಕೆಲ ತಿಂಗಳ ವಿರಾಮ ತೆಗೆದುಕೊಂಡಿದ್ದ ಚಿತ್ರತಂಡದ ಚಿತ್ರೀಕರಣ ವೇಗ ಪಡೆದುಕೊಂಡಿದೆ.

ಕಿಚ್ಚ ಸುದೀಪ್ ಅಭಿನಯದ ಬಹುನಿರೀಕ್ಷಿತ 'ಬಿಲ್ಲ ರಂಗ ಭಾಷಾ' ಚಿತ್ರದ ಚಿತ್ರೀಕರಣ ಮತ್ತೆ ವೇಗ ಪಡೆದುಕೊಂಡಿದೆ. ಮೊದಲ ಶೆಡ್ಯೂಲ್ ಬಳಿಕ ಕೆಲ ತಿಂಗಳ ವಿರಾಮ ತೆಗೆದುಕೊಂಡಿದ್ದ ಚಿತ್ರ ತಂಡ, ಇದೀಗ ಎರಡನೇ ಹಂತದ ಚಿತ್ರೀಕರಣದಲ್ಲಿ ಬ್ಯುಸಿಯಾಗಿದೆ. ಈ ನಡುವೆ ಚಿತ್ರದ ಶೂಟಿಂಗ್ ಮತ್ತು ಬಿಡುಗಡೆ ಕುರಿತಂತೆ ನಿರ್ಮಾಪಕ ನಿರಂಜನ್ ರೆಡ್ಡಿ ಮಹತ್ವದ ಮಾಹಿತಿ ಹಂಚಿಕೊಂಡಿದ್ದಾರೆ.



ಪ್ರಸ್ತುತ ನಡೆಯುತ್ತಿರುವ ಶೆಡ್ಯೂಲ್ ಪೂರ್ಣಗೊಂಡ ಬಳಿಕ ಚಿತ್ರದ ಒಟ್ಟು ಶೇಕಡಾ 40ರಷ್ಟು ಚಿತ್ರೀಕರಣ ಮುಗಿಯಲಿದೆ ಎಂದು ಅವರು ತಿಳಿಸಿದ್ದಾರೆ. ಉಳಿದ ಭಾಗದ ಚಿತ್ರೀಕರಣ ವನ್ನು ಇದೇ ವರ್ಷದ ಡಿಸೆಂಬರ್ ಅಥವಾ 2027ರ ಜನವರಿಯೊಳಗೆ ಪೂರ್ಣ ಗೊಳಿಸುವ ಗುರಿಯನ್ನು ಚಿತ್ರತಂಡ ಹೊಂದಿದೆ.

ಚಿತ್ರೀಕರಣ ಮುಗಿದ ನಂತರ ಚಿತ್ರವು ದೀರ್ಘ ಪೋಸ್ಟ್–ಪ್ರೊಡಕ್ಷನ್ ಹಂತವನ್ನು ಪ್ರವೇಶಿಸಲಿದೆ.

ಚಿತ್ರದಲ್ಲಿ ಸುಮಾರು 90 ಶೇಕಡಾ ಸಿಜಿಐ (CGI) ಮತ್ತು ವಿಎಫ್‌ಎಕ್ಸ್ (VFX) ಬಳಕೆಯಾಗುತ್ತಿರು ವುದರಿಂದ ದೃಶ್ಯ ಪರಿಣಾಮಗಳ ಕೆಲಸಕ್ಕೆ ಹೆಚ್ಚಿನ ಸಮಯ ಮೀಸಲಿಡಲಾಗಿದೆ. ಪ್ರೇಕ್ಷಕರಿಗೆ ವಿಭಿನ್ನ ದೃಶ್ಯ ಅನುಭವ ನೀಡುವ ಉದ್ದೇಶದಿಂದ ಅತ್ಯಾಧುನಿಕ ತಂತ್ರಜ್ಞಾನವನ್ನು ಬಳಸಲಾಗುತ್ತಿದೆ.

# ರಾವಣನ ಪಾತ್ರಕ್ಕೆ ಹೊಸ ಆಯಾಮ ನೀಡಿದ್ದೇನೆ: ನಟ ಯಶ್

## 'ರಾಮಾಯಣ' ಚಿತ್ರದಲ್ಲಿ ರಾವಣನಾಗಿ ನಟಿಸುವುದು ದೊಡ್ಡ ಜವಾಬ್ದಾರಿ–ಯಶ್



ಮುಂಬೈ । ಸ್ವರ್ಣ ಭಾರತ್ ಟೈಮ್ಸ್ ಸಿನಿ ಡೆಸ್ಕ್

ಪ್ಯಾನ್ ಇಂಡಿಯಾ ನಟ ರಾಕಿಂಗ್ ಸ್ಟಾರ್ ಯಶ್ ಅಭಿನಯದ ಬಹುನಿರೀಕ್ಷಿತ 'ರಾಮಾಯಣ' ಚಿತ್ರ ಈಗಾಗಲೇ ದೇಶಾದ್ಯಂತ ಭಾರಿ ಕುತೂಹಲ ಮೂಡಿಸಿದೆ. ಈ ಚಿತ್ರದಲ್ಲಿ ಯಶ್ ಲಂಕಾಧಿಪತಿ ರಾವಣ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದು, ತಮ್ಮ ಪಾತ್ರದ ಕುರಿತು ಮೊದಲ ಬಾರಿಗೆ ಮನದಾಳದ ಮಾತುಗಳನ್ನು ಹಂಚಿಕೊಂಡಿದ್ದಾರೆ.

ರಾವಣನಂತಹ ಪೌರಾಣಿಕ ಮತ್ತು ಬಹುಮುಖ ವ್ಯಕ್ತಿತ್ವದ ಪಾತ್ರವನ್ನು ನಿರ್ವಹಿಸುವುದು ಅತ್ಯಂತ ದೊಡ್ಡ ಜವಾಬ್ದಾರಿ ಹಾಗೂ ಸವಾಲಿನ ಕೆಲಸ ಎಂದು ಯಶ್ ಹೇಳಿದ್ದಾರೆ. ಈ ಪಾತ್ರವನ್ನು ಸಾಮಾನ್ಯ ಖಳನಾಯಕನಂತೆ ಅಲ್ಲ, ವಿಭಿನ್ನ ದೃಷ್ಟಿಕೋನದಿಂದ ಪ್ರೇಕ್ಷಕರ ಮುಂದೆ ತರಲು ಪ್ರಯತ್ನಿಸಿದ್ದೇನೆ ಎಂದು ಅವರು ತಿಳಿಸಿದ್ದಾರೆ.

"ರಾವಣನ ಪಾತ್ರಕ್ಕೆ ನಾನು ವಿಭಿನ್ನ ಆಯಾಮ ನೀಡಿದ್ದೇನೆ. ಜನರು ಇದುವರೆಗೆ ನೋಡದ ರೀತಿಯಲ್ಲಿ ಆತನ ವ್ಯಕ್ತಿತ್ವವನ್ನು ಅರ್ಥಮಾಡಿಕೊಳ್ಳುವ ಪ್ರಯತ್ನ ಮಾಡಿದ್ದೇವೆ," ಎಂದು ಯಶ್ ಹೇಳಿದ್ದಾರೆ.

ಯಶ್ ಅವರ ಪ್ರಕಾರ, ರಾವಣ ಕೇವಲ ದುಷ್ಟ ರಾಜನಲ್ಲ; ಅಪಾರ ಜ್ಞಾನ, ಶೌರ್ಯ, ಆಡಳಿತ



ಸಾಮರ್ಥ್ಯ ಮತ್ತು ಅಹಂಕಾರದ ಸಂಕೇತವಾಗಿದ್ದ ವ್ಯಕ್ತಿ. ಈ ಎಲ್ಲಾ ಅಂಶಗಳನ್ನು ಸಮತೋಲನದಿಂದ ತೆರೆಗೆ ತರುವುದು ಚಿತ್ರತಂಡದ ಉದ್ದೇಶವಾಗಿದೆ.

ಚಿತ್ರದ ನಿರ್ದೇಶಕ ನಿತೇಶ್ ತಿವಾರಿ ಅವರ ದೃಷ್ಟಿಕೋನವನ್ನು ಮೆಚ್ಚಿರುವ ಯಶ್, ಭಾರತೀಯ ಸಂಸ್ಕೃತಿ ಮತ್ತು ರಾಮಾಯಣದ ಮೂಲ ಮೌಲ್ಯಗಳಿಗೆ ಗೌರವ ನೀಡುವ ರೀತಿಯಲ್ಲಿ ಚಿತ್ರವನ್ನು ನಿರ್ಮಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

### ಭಾರೀ ತಾರಾಗಣ

'ರಾಮಾಯಣ' ಚಿತ್ರದಲ್ಲಿ ಹಲವು ಖ್ಯಾತ ನಟರು ಪ್ರಮುಖ ಪಾತ್ರಗಳಲ್ಲಿ ಅಭಿನಯಿಸುತ್ತಿದ್ದಾರೆ.

ರಣಬೀರ್ ಕಪೂರ್– ಶ್ರೀರಾಮ

ಸಾಯಿ ಪಲ್ಲವಿ–ಸೀತೆ

ಯಶ್–ರಾವಣ

ಸನ್ನಿ ದಿಯೋಲ್–ಹನುಮಂತ

ರವಿ ದುಬೆ–ಲಕ್ಷ್ಮಣ

ಭಾರೀ ಬಜೆಟ್‌ನಲ್ಲಿ ನಿರ್ಮಾಣವಾಗುತ್ತಿರುವ ಈ ಚಿತ್ರವು ಅತ್ಯಾಧುನಿಕ ತಂತ್ರಜ್ಞಾನ, ಅದ್ದೂರಿ ಸೆಟ್‌ಗಳು ಮತ್ತು ಅಂತರರಾಷ್ಟ್ರೀಯ ಮಟ್ಟದ ದೃಶ್ಯ ವೈಭವದೊಂದಿಗೆ ತೆರೆಗೆ ಬರಲಿದೆ.

### ಸಿನಿಪ್ರಿಯರ ನಿರೀಕ್ಷೆ ಹೆಚ್ಚಳ

ಯಶ್ ಅವರ ಹೇಳಿಕೆಯ ಬಳಿಕ ಸಾಮಾಜಿಕ ಜಾಲತಾಣಗಳಲ್ಲಿ ಅಭಿಮಾನಿಗಳ ಕುತೂಹಲ ಮತ್ತಷ್ಟು ಹೆಚ್ಚಾಗಿದೆ. ರಾವಣನ ಪಾತ್ರದಲ್ಲಿ ಯಶ್ ಯಾವ ರೀತಿಯ ಹೊಸ ಛಾಪು ಮೂಡಿಸಲಿದ್ದಾರೆ ಎಂಬುದನ್ನು ಕಾತುರದಿಂದ ಎದುರು ನೋಡುತ್ತಿದ್ದಾರೆ.

'ರಾಮಾಯಣ' ಭಾರತೀಯ ಸಿನಿರಂಗದ ಅತ್ಯಂತ ಮಹತ್ವಾಕಾಂಕ್ಷೆಯ ಚಿತ್ರಗಳಲ್ಲಿ ಒಂದಾಗಿದ್ದು, ಬಿಡುಗಡೆಯ ಮುನ್ನವೇ ದೇಶ–ವಿದೇಶಗಳಲ್ಲಿ ಅಪಾರ ಚರ್ಚೆಗೆ ಗ್ರಾಸವಾಗಿದೆ.

■ ಸ್ವರ್ಣ ಭಾರತ್ ಟೈಮ್ಸ್

Edited by : Santosh Kumar, Printed By Santosh Kumar, Published By Santosh Kumar, Owned By Santosh Kumar, Place of Publication No.3124, 2nd Floor Double Road, Near Esi Hospital, Hal 2nd Stage, Bengaluru, Karnataka-560 038. Printer: MD KRISHNA Printed at: Chamundi Printers & Publishers,No. 1580, 7th Main, R.p.c. Layout, Bengaluru, Karnataka - 560104. e-mail: swarnabharattimes@gmail.com Editor: Santosh Kumar, Cell:9845732329